ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 01 ಇಎಸ್‌ಟಿ [9] 2017 /2821

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:24-01-2018.

**ಹಿಂಬರಹ**

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಆಇ 16 ಬಿಪಿಇ 2017 ಬೆಂಗಳೂರು ದಿನಾಂಕ:**11.01.2018** ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಡಿವಿಪಿ(1) ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ.ಎಸ್.ಟಿ(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
7. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

CN: 17329

ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಖಜಾನೆಗಳಲ್ಲಿ ವರ್ಷಾಂತ್ಯದ ಬಿಲ್ಲುಗಳನ್ನು ಮಾರ್ಚ್ 31ರಂದೇ ತೀರ್ಣಗೊಳಿಸಿ ಲೆಕ್ಕವನ್ನು ಮುಕ್ತಾಯಗೊಳಿಸುವ ಬಗ್ಗೆ.

**ಓದಲಾಗಿದೆ :** 1. ಸರ್ಕಾರಿ ಆದೇಶ ಸಂಖ್ಯೆ :ಆಇ 02 ಬಿಪಿಇ 2017, ದಿನಾಂಕ:21-01-2017.
2. ನಿರ್ದೇಶಕರು, ಖಜಾನೆ ಇಲಾಖೆ ಇವರ ಪತ್ರ ಸಂಖ್ಯೆ: ಖ.ನಿ. ಪ್ರಕ್ರಿಯೆ/73/2016-17, ದಿನಾಂಕ: 14-12-2017.

* * * * *

**ಪ್ರಸ್ತಾವನೆ :**

2016-17ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿನಾಂಕ: 31-3-2017ರಂದೇ 2016-17ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ಕಾಲಮಿತಿ ಸೂಚಿಸಿ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿತ್ತು. ಸದರಿ ವೇಳಾಪಟ್ಟಿಯಂತೆ ಇಲಾಖಾ ಅಧಿಕಾರಿಗಳು ಹಾಗೂ ಖಜಾನಾಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿದ್ದು ಯೋಜನೆಯನ್ನು ಯಶಸ್ವಿಯಾಗಿ ನಿರ್ವಹಿಸಲಾಗಿದೆ.

2017-18ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಸಹ ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿನಾಂಕ:31-3-2018ರಂದೇ 2017-18ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಸೂಕ್ತ ವೇಳಾಪಟ್ಟಿಯನ್ನು ನೀಡಿ ಸಾಕಷ್ಟು ಮುಂಚಿತವಾಗಿ ಆದೇಶವನ್ನು ಹೊರಡಿಸುವುದು ಅವಶ್ಯವಿದೆಯೆಂದು ಖಜಾನೆ ನಿರ್ದೇಶಕರು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರವನ್ನು ಕೋರಿದ್ದಾರೆ. ಆದ್ದರಿಂದ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ : ಆಇ 16 ಬಿಪಿಇ 2017, ಬೆಂಗಳೂರು, ದಿನಾಂಕ:11-01-2018**

ಎ) ಆಡಳಿತ ಇಲಾಖೆಗಳ ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸಲು ನಿಗದಿಗೊಳಿಸಿರುವ ಕಾಲಮಿತಿ.

| ಕ್ರ ಸಂ: | ಬಿಲ್ಲುಗಳ ಸ್ವರೂಪ/ವಿವರಗಳು | 31-01-2018ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ upload ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | 31-01-2018ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ | |
|---|---|---|---|---|
| | | | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ |
| 1 | 2 | 3 | 4 | 5 |
| 1 | ವೇತನ/ವೇತನ ಬಾಕಿ ಬಿಲ್ಲುಗಳು/ಸಹಾಯಾನುದಾನ-ವೇತನಾ ಬಿಲ್ಲುಗಳು | 17.02.2018 | 12.03.2018 | 15.03.2018 |

JD (Plan) DVP(I)/Cash
181
DVP(I)
20/01/18
12.45 PM
Received on 2/02/18

| ಕ್ರ ಸಂ: | ಬಿಲ್ಲುಗಳ ಸ್ವರೂಪ/ವಿವರಗಳು | 31-01-2018ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ upload ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | 31-01-2018ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ | |
|---|---|---|---|---|
| | | | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ |
| 1 | 2 | 3 | 4 | 5 |
| 2 | ಹಬ್ಬದ ಮುಂಗಡ ಬಿಲ್ಲು | --- | | 8.03.2018 |
| 3 | ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳು | 17.02.2018 | 05.03.2018 | 12.03.2018 |
| 4 | EAP, ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆ ಹೊರತುಪಡಿಸಿ ಇತರೆ ಯೋಜನೆಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು ಹಾಗೂ ವೇತನೇತರ ಸಹಾಯಾನುದಾನ ಬಿಲ್ಲುಗಳು | 20.02.2018 | 15.03.2018 | 20.03.2018 |
| 5 | ಸಂಕ್ಷಿಪ್ತ ಸಾದಿಲ್ವಾರು ಬಿಲ್ಲುಗಳು ಹಾಗೂ EAP, ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆ ಬಿಲ್ಲುಗಳು | 15.03.2018 | | 15.03.2018 |
| 6 | ಏಪ್ರಿಲ್ ತಿಂಗಳಲ್ಲಿ ಪಾವತಿಯಾಗುವ ಮಾರ್ಚ್ ತಿಂಗಳ ವೇತನ/ವೇತನ ಅನುದಾನಿತ ಬಿಲ್ಲುಗಳು | --- | 02.04.2018 ರ ನಂತರ | |
| 7 | ಇಲಾಖೆಗಳು ಹಾಗೂ ಸಚಿವಾಲಯದ ಆಡಳಿತ ಇಲಾಖೆಗಳು ಹೊರಡಿಸುವ ಮರುವಿನಿಯೋಗದ ಬಿಲ್ಲುಗಳು | --- | 12.03.2018 | |

| ಕ್ರ ಸಂ: | ಬಿಲ್ಲುಗಳ ಸ್ವರೂಪ/ವಿವರಗಳು | 31-01-2018ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ upload ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | 31-01-2018ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ | |
|---|---|---|---|---|
| | | | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ |
| 1 | 2 | 3 | 4 | 5 |
| 8 | ವಿದ್ಯುಚ್ಛಕ್ತಿ, ದೂರವಾಣಿ ಹಾಗೂ ಕಟ್ಟಡ ಬಾಡಿಗೆಗೆ ಸಂಬಂಧಿಸಿದ ಬಿಲ್ಲುಗಳು | ---- | 16-03-2018 | |
| 9 | ಪೂರಕ ಅಂದಾಜು-3 ರಲ್ಲಿ ಸಕ್ರಮಗೊಳಿಸುವ ಹೆಚ್ಚುವರಿ ಆದೇಶದ ಬಿಲ್ಲುಗಳು | ---- | 12.03.2018 | 20.03.2018 |
| 10 | ಪೂರಕ ಅಂದಾಜು-3 ರಲ್ಲಿ ಒದಗಿಸಿರುವ ಅನುದಾನದ ಬಿಲ್ಲುಗಳು | ---- | 15.03.2018 | 24.03.2018 |
| 11 | ZP/TP ಗೆ ಸಂಬಂಧಿಸಿದ ಎಲ್ಲಾ upload ಗಳು | ---- | 12.03.2018 | |

ಬಿ) <u>ಆಡಳಿತ ಇಲಾಖೆಗಳಿಗೆ ಸೂಚನೆಗಳು</u>

1. ದಿನಾಂಕ:31-03-2018ರ ಅಪರಾಹ್ನ 2.30 ಘಂಟೆಯ ನಂತರ. ಯಾವುದೇ ಬಿಲ್ಲುಗಳನ್ನು ಖಜಾನೆಗಳಿಗೆ ಸಲ್ಲಿಸುವುದನ್ನು ನಿರ್ಬಂಧಿಸಲಾಗಿದೆ.

2. ಇಲಾಖಾ ಮುಖ್ಯಸ್ಥರು ಮತ್ತು ಅವರುಗಳ ಹಣ ಪಡೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ಈ ಆದೇಶದಲ್ಲಿ ತಿಳಿಸಿರುವ ವೇಳಾ ಪಟ್ಟಿಯಂತೆ ಕ್ರಮ ಕೈಗೊಳ್ಳತಕ್ಕದ್ದು ಮತ್ತು ಆರ್ಥಿಕ ಮಿತವ್ಯಯ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

3. ಸರ್ಕಾರದ ಆದೇಶ ಸಂಖ್ಯೆ: ಆಇ 2 ಟಿಎಫ್‌ಸಿ 2004, ದಿನಾಂಕ: 09-09-2004ರಲ್ಲಿ ತಿಳಿಸಿರುವ ಸೂಚನೆಗಳನ್ನು ಸಹ ಗಮನದಲ್ಲಿಟ್ಟುಕೊಂಡು ಮೇಲೆ ಹೇಳಿರುವ ಅಂಶಗಳನ್ನು ಗಣನೆಗೆ

ತೆಗೆದುಕೊಂಡು ಆಯವ್ಯಯದಲ್ಲಿ ನಿಗದಿ ಪಡಿಸಿರುವ ಮೊತ್ತವನ್ನು ದಿನಾಂಕ **31-03-2018**ರೊಳಗೆ ವೆಚ್ಚ ಮಾಡತಕ್ಕದ್ದು.

4. ಕ್ರಮ ಸಂಖ್ಯೆ-4ಕ್ಕೆ ಸಂಬಂಧಿಸಿದಂತೆ ಕಾಲೇಜು ಶಿಕ್ಷಣ, ತಾಂತ್ರಿಕ ಶಿಕ್ಷಣ, ಪದವಿ ಪೂರ್ವ ಶಿಕ್ಷಣ, ಅಂಗವಿಕಲರ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ವಿದ್ಯಾರ್ಥಿವೇತನದ ಫಲಾನುಭವಿಗಳ ಪಟ್ಟಿಯನ್ನು ಸಾಕಷ್ಟು ಮುಂಚಿತವಾಗಿ ಡಿಡಿಓ ಗಳು ತಯಾರಿಸತಕ್ಕದ್ದು.

5. ಖಜಾನೆ-2 ರಲ್ಲಿ ಬಿಲ್ಲುಗಳನ್ನು ಸಲ್ಲಿಸುವ ಹಣ ಸೆಳೆಯುವ ಬಟವಾಡೆ ಅಧಿಕಾರಿಗಳು ಮೇಲೆ ಉಲ್ಲೇಖಿಸಿದ ದಿನಾಂಕದೊಳಗೆ ಆನ್‌ಲೈನ್‌ನಲ್ಲಿ ಮತ್ತು ಭೌತಿಕವಾಗಿ ಬಿಲ್ಲುಗಳನ್ನು ಸಲ್ಲಿಸತಕ್ಕದ್ದು.

ಸಿ) <u>ಖಜಾನೆಗಳಿಗೆ ಸೂಚನೆಗಳು.</u>

1. ಎಲ್ಲಾ ಖಜಾನೆಗಳಲ್ಲಿ ಲೆಕ್ಕಗಳನ್ನು ಅಂತಿಮಗೊಳಿಸಲು ಅನುಕೂಲವಾಗುವಂತೆ ದಿನಾಂಕ:**02-04-2018ನ್ನು** ವ್ಯವಹಾರ ರಹಿತ ದಿನವನ್ನಾಗಿ ಘೋಷಿಸಲಾಗಿದೆ.

2. ಖಜಾನೆಗಳು **ಮಾರ್ಚ್ 2018**ರ ಲೆಕ್ಕಗಳನ್ನು **31ನೇ ಮಾರ್ಚ್ 2018**ರ ನಂತರವೂ ತೆರೆದಿರಕೂಡದೆಂದು ಸೂಚಿಸಲಾಗಿದೆ.

3. ಮಹಾಲೇಖಪಾಲರು (ಎ ಮತ್ತು ಇ)ರವರು 2017-18ರ ತಾತ್ಕಾಲಿಕ ಲೆಕ್ಕಗಳನ್ನು 10ನೇ ಮೇ 2018ರೊಳಗಾಗಿ ಸರ್ಕಾರಕ್ಕೆ ಕಳುಹಿಸಲು ಅನುವಾಗುವಂತೆ ಖಜಾನಾಧಿಕಾರಿಗಳು ನಿಗದಿತ ಸಮಯದೊಳಗೆ ಮಹಾಲೇಖಪಾಲರಿಗೆ ಮಾರ್ಚ್ 2018ರ ಲೆಕ್ಕಗಳನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಸಿಂಧು)
ಸರ್ಕಾರದ ಉಪ ಕಾರ್ಯದರ್ಶಿ
(ಆಯವ್ಯಯ & ಸಂಪನ್ಮೂಲ)
ಆರ್ಥಿಕ ಇಲಾಖೆ

ಇವರಿಗೆ :

1) ಮಹಾಲೇಖಪಾಲರು (A&E)/ (G&SSA)/ (E&RSA), ಕರ್ನಾಟಕ, ಬೆಂಗಳೂರು.
2) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
3) ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
4) ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
5) ಸರ್ಕಾರದ ಎಲ್ಲಾ ಅಪರ/ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.

6) ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
7) ಲೋಕಾಯುಕ್ತರು, ಕರ್ನಾಟಕ, ಬೆಂಗಳೂರು.
8) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
9) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9
10) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು /ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12) ಎಲ್ಲಾ ಆಂತರಿಕ ಆರ್ಥಿಕ ಸಲಹೆಗಾರರು.
13) ಎಲ್ಲಾ ಇಲಾಖಾ ಮುಖ್ಯಸ್ಥರು.
14) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿಗಳು.